<u>ಅಧಿಕ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ನ್ಯಾಯಾಲಯ, ಗುಬ್ಬಿ</u>

ಓ ಎಸ್ ನಂ. **78/2014** ಪಿ .ಡಬ್ಲು: **2**

<u>ದಿನಾಂಕ: **12.03.2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲು: ಪ್ರತಿವಾದಿ ಪರ ಶ್ರೀ. ಸಿ.ಎಸ್.ಎ ವಕೀಲರಿಂದ:</u>

ವಾದಿಯ paint ಅಂಗಡಿಗೆ ನಾನು ಗ್ರಾಹಕನಾಗಿರುತ್ತೇನೆ ಆದ್ದರಿಂದ ವಾದಿ ನನಗೆ ಪರಿಚಯ. ವಾದಿ ನನ್ನ ಮಾವ. ಪ್ರಸ್ತುತ ದಾವೆಯ ಪ್ರತಿವಾದಿಗಳನ್ನು ನಾನು ನೋಡಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ತಂದೆ ಹೆಸರು ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿಯನ್ನು ನಾನು ನೋಡಿರುವುದಿಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ವಕೀಲರು ಬರೆಸಿದ್ದು ಅದಕ್ಕೆ ನಾನು ಸಹಿ ಮಾಡಿರುತ್ತೇನೆ, ಅದರಲ್ಲಿರುವ ವಿಚಾರಗಳನ್ನು ನಾನು ಹೇಳಿ ಬರೆಸಿರುವುದಿಲ್ಲ.

ದಾವಾ ಸ್ವತ್ತನ್ನು ನಾನು ನೋಡಿರುವುದಿಲ್ಲ. ದಾವಾ ಸ್ವತ್ತು 1 ನೇ ಪ್ರತಿವಾದಿಗೆ ವಿಭಾಗದ ಮೂಲಕ ಬಂದಿರುತ್ತದೆ ಎಂದರೆ ಸರಿ. 1 ನೇ ಪ್ರತಿವಾದಿಗೆ ಇಬ್ಬರು ಮಕ್ಕಳು, ಅವರೆಂದರೆ ಪ್ರತಿವಾದಿ 1(ಎ) ಮತ್ತು (ಬಿ). ಅವರೆಲ್ಲರೂ 1 ನೇ ಪ್ರತಿವಾದಿಯ ಜೊತೆಗೆ ಬ್ಯಾಲಹಳ್ಳಿ ಗ್ರಾಮದಲ್ಲಿ ವಾಸವಿದ್ದರು ಎಂದರೆ ಸರಿ. ಪ್ರತಿವಾದಿ 1(ಎ) ಮತ್ತು (ಬಿ) ಈಗಲೂ ಬ್ಯಾಲಹಳ್ಳಿಯಲ್ಲೇ ವಾಸವಿರುತ್ತಾರೆ ಎಂದರೆ ಸರಿ. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ವಾದಿ ಮತ್ತು 1 ನೇ ಪ್ರತಿವಾದಿ ನಡುವೆ ಯಾವ ರೀತಿ ಮಾತುಕತೆ ನಡೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿ ವಾದಿಯಿಂದ 1,92,500/- ರೂಪಾಯಿಗಳನ್ನು ನನ್ನ ಸಮಕ್ಷಮ ಪಡೆದುಕೊಂಡಿರುವುದಿಲ್ಲ ಎಂದರೆ ಸರಿ.

ನಿಪಿ.1 ನ್ನು ನಾನು ಓದದೇ ವಾದಿ ನನ್ನ ಮಾವನಾಗಿರುವುದರಿಂದ ಅದರ ಮೇಲೆ ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರಿದು ನಿಪಿ.1 ರಲ್ಲಿರುವ ವಿಚಾರಗಳನ್ನು ನಾನು ತಿಳಿದುಕೊಂಡಿರುತ್ತೇನೆ. ನಿಪಿ.1 ಕರಾರು ಪತ್ರ

ಯಾವ ದಿನಾಂಕ ದಂದು , ಎಷ್ಟು ಸಮಯಕ್ಕೆ ಮತ್ತು ಎಲ್ಲಿ ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿರುವ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.1 ಮತ್ತು 2ನೇ ಪ್ರತಿವಾದಿಗಳು ನಿಪಿ.1 ಕ್ಕೆ ನನ್ನ ಸಮಕ್ಷಮ ಸಹಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರಿದು, 1 ಮತ್ತು 2ನೇ ಪ್ರತಿವಾದಿಗಳು ಉಪನೊಂದಣಾಧಿಕಾರಿಗಳ ಕಚೇರಿಯಲ್ಲಿ ನಿಪಿ.1 ಕ್ಕೆ ನನ್ನ ಸಮಕ್ಷಮ ಸಹಿ ಮಾಡಿರುತ್ತಾರೆ ಎನ್ನುತ್ತಾರೆ. ಪ್ರತಿವಾದಿಗಳು ವಾದಿಯಿಂದ 1,92,500/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು ಅದರ ಭದ್ರತೆಗಾಗಿ ಅಡಮಾನ ಪತ್ರ ಬರೆದುಕೊಡುತ್ತಿದ್ದೇವೆ ಎಂದುಕೊಂಡು ನಿಪಿ.1 ಕ್ಕೆ ಸಹಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಗಳ ನಡುವೆ ನಡೆದ ಮಾತುಕತೆಯ ಬಗ್ಗೆ ನನಗೆ ಗೊತ್ತಿಲ್ಲದೇ ಇದ್ದರೂ ವಾದಿಯ ಪರವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ**.**

**(**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು**)**

ಓ **.** ಹೇ**.** ಕೇ**.** ಸರಿ**.** ಇದೆ

**sd/-**

ಅಧಿಕ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ **,** ಗುಬ್ಬಿ**.**